ಬೆಳಗಾವಿ ನಗರದ ಕೋಟೆಯ ಅಭಿವೃದ್ಧಿ ಮತ್ತು ಸೌಂದರೀಕರಣ

33 (53) ಶ್ರೀ ಅಭಯ್ ಪಾಟೀಲ್ (ಬೆಳಗಾಂ ದಕ್ಷಿಣ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೆಳಗಾವಿ ನಗರದ ಕೋಟೆಯ ಜೀರ್ಣೋದ್ಧಾರ ಮತ್ತು ಸೌಂದರೀಕರಣದ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಇದ್ದಲ್ಲಿ, ಎಷ್ಟು ಅಂದಾಜು ಮೊತ್ತದ ಪ್ರಸ್ತಾವನೆಯನ್ನು ಸಿದ್ದಪಡಿಸಿದೆ;

ಇ) ಇಲ್ಲವಾದಲ್ಲಿ ಯಾವಾಗ ಪ್ರಸ್ತಾವನೆಯನ್ನು ಸಿದ್ದಪಡಿಸಿ, ಕೋಟೆಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು?

ಶ್ರೀ ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು):

ಅ) ಹೌದು

ಆ) ಸೂಕ್ತ ಪ್ರಸ್ತಾವನೆಯನ್ನು ಸಿದ್ದಪಡಿಸಿ ಸಲ್ಲಿಸಲು ಜಿಲ್ಲಾಧಿಕಾರಿ, ಬೆಳಗಾವಿ ಜಿಲ್ಲೆ ಇವರನ್ನು ಕೋರಲಾಗಿದೆ.

ಇ) ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು.

ಚಿತ್ರದುರ್ಗ ನಗರಸಭೆಯಲ್ಲಿ ಖಾಲಿ ಇರುವ ಹುದ್ದೆಗಳು

34 (52) ಶ್ರೀ ಬಸವರಾಜನ್.ಎಸ್.ಕೆ (ಚಿತ್ರದುರ್ಗ): ಮಾನ್ಯ ನಗರಾಭಿವೃದ್ಧಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಚಿತ್ರದುರ್ಗ ನಗರಸಭೆಯಲ್ಲಿ ಖಾಲಿ ಹುದ್ದೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಹುದ್ದೆಗಳವಾರು ವಿವರಗಳನ್ನು ನೀಡುವುದು;

ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೆ;